ಅಧ್ಯಕ್ಷರು :- ಪ್ರಸ್ತಾವ ಏನೆಂದರೆ,

"2009ರ ಕರ್ನಾಟಕ ದೇವದಾಸಿಯರ (ಸಮರ್ಪಣಾ ನಿಷೇಧ) (ತಿದ್ದುಪಡಿ) ವಿಧೇಯಕ" ವನ್ನು ಸಭೆಯ ಮುಂದೆ ಮಂಡಿಸಲು ಅನುಮತಿ ನೀಡುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಪಿ.ಎಂ. ನರೇಂದ್ರಸ್ವಾಮಿ (ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು) :- ಮಾನ್ಯ ಅಧ್ಯಕ್ಷರೆ, 2009ರ ಕರ್ನಾಟಕ ದೇವದಾಸಿಯರ (ಸಮರ್ಪಣಾ ನಿಷೇಧ) (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು :- ವಿಧೇಯಕವನ್ನು ಮಂಡಿಸಲಾಗಿದೆ.

6. ಗಮನ ಸೆಳೆಯುವ ಸೂಚನೆಗಳು

ಅ) ವಿಷಯ :- ಮುಳಬಾಗಿಲು ತಾಲ್ಲೂಕನ್ನು 2008-09ರ ಸಾಲಿನ ಬರಪೀಡಿತ ಪ್ರದೇಶವೆಂದು ಘೋಷಣೆ ಮಾಡಿದ್ದು, ಪರಿಹಾರದ ಸಂಬಂಧದಲ್ಲಿ ಕೆಲವು ಯೋಜನೆಗಳನ್ನು ಸರ್ಕಾರ ಘೋಷಿಸಿದ್ದು, ಈವರೆವಿಗೂ ಯೋಜನೆಗಳು ಅನುಷ್ಠಾನ ಗೊಳ್ಳದಿರುವ ಬಗ್ಗೆ.

ಶ್ರೀ ಅಮರೇಶ್ (ಮುಳಬಾಗಿಲು) :- ಮಾನ್ಯ ಅಧ್ಯಕ್ಷರೇ, ಮುಳಬಾಗಿಲು ತಾಲ್ಲೂಕನ್ನು 2008-09ರ ಸಾಲಿನ ಬರಪೀಡಿತ ಪ್ರದೇಶವೆಂದು ಘೋಷಣೆ ಮಾಡಿದ್ದು, ಪರಿಹಾರದ ಸಂಬಂಧದಲ್ಲಿ ಕೆಲವು ಯೋಜನೆಗಳನ್ನು ಸರ್ಕಾರ ಘೋಷಿಸಿದ್ದು, ಈವರೆವಿಗೂ ಯೋಜನೆಗಳು ಅನುಷ್ಠಾನಗೊಳ್ಳದಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನವನ್ನು ಸೆಳೆಯುತ್ತೇನೆ.

ಶ್ರೀ ಜಿ. ಕರುಣಾಕರ ರೆಡ್ಡಿ (ಕಂದಾಯ ಸಚಿವರು) :- ಮಾನ್ಯ ಅಧ್ಯಕ್ಷರೇ, ತಮ್ಮ ಅನುಮತಿಯನ್ನು ಪಡೆದು ಈ ಹೇಳಿಕೆಯನ್ನು ನೀಡ ಬಯಸುತ್ತೇನೆ.

2008-09ನೇ ಸಾಲಿನಲ್ಲಿ ಮುಂಗಾರು ಮಾಮೂಲಿನಂತೆ ಪ್ರಾರಂಭವಾದರೂ ಕರಾವಳಿ ಪ್ರದೇಶವನ್ನು ಬಿಟ್ಟು ರಾಜ್ಯದ ಇತರ ಭಾಗಗಳಲ್ಲಿ ಮುಂಗಾರು ದುರ್ಬಲವಾಗಿತ್ತು. ಜೂನ್ - 1 ರಿಂದ ಅಗಸ್ಟ್ - 5 ರವರೆಗೆ ರಾಜ್ಯದಲ್ಲಿ ಮಳೆ ಬೆಳೆ ಪರಿಸ್ಥಿತಿ ಪರಿಶೀಲಿಸಿದಾಗ 501 ಮಿ.ಮೀ ವಾಡಿಕೆ ಮಳೆಯಾಗಬೇಕಿದ್ದು, ವಾಸ್ತವವಾಗಿ 385 ಮಿ.ಮೀ ಮಳೆಯಾಗಿ ಶೇಕಡಾ (-) 23ರಷ್ಟು ಮಳೆ ಕೊರತೆಯಾಗಿರುತ್ತದೆ. ಜೂನ್

1- ರಿಂದ ಜುಲೈ - 24 ರವರೆಗೆ ಶೇಕಡಾ 20ಕ್ಕೂ ಹೆಚ್ಚಿನ ಮಳೆ ಕೊರತೆ ಹಾಗೂ 4 ವಾರ ಅಥವಾ ಅದಕ್ಕಿಂತ ಹೆಚ್ಚಿನ ಅವಧಿಗೆ ಒಣ ಹವೆಯಿಂದ ಭಾಧಿತವಾದ 84 ತಾಲ್ಲೂಕುಗಳನ್ನು (ಮುಳಬಾಗಿಲು ತಾಲ್ಲೂಕು ಸೇರಿದಂತೆ) ಸರ್ಕಾರದ ಆದೇಶ ಸಂಖ್ಯೆ : ಕಂಇ 269 ಟಿಎನ್ಆರ್ 2008 ದಿನಾಂಕ :- 29-08-2008 ರಂತೆ ಬರಪೀಡಿತ ತಾಲ್ಲೂಕುಗಳೆಂದು ಘೋಷಿಸಲಾಗಿದೆ. ಬರಪೀಡಿತವೆಂದು ಘೋಷಿಸಿರುವ ತಾಲ್ಲೂಕುಗಳಲ್ಲಿ

1) ಉದ್ಯೋಗ ಖಾತರಿ ಯೋಜನೆ ಅಡಿಯಲ್ಲಿ ಗರಿಷ್ಟ ಮಟ್ಟದಲ್ಲಿ ಉದ್ಯೋಗ ಒದಗಿಸಬೇಕು.

2) ಕುಡಿಯುವ ನೀರು ಸರಬರಾಜು ವ್ಯವಸ್ಥೆ

3) ಜಾನುವಾರುಗಳ ಸಂರಕ್ಷಣೆ ಇತ್ಯಾದಿ ಕೆಲಸ ಕಾರ್ಯಗಳನ್ನು ಕೈಗೊಳ್ಳುವಂತೆ ಆದೇಶಿಸಿದೆ.

2008-09ನೇ ಸಾಲಿನಲ್ಲಿ ಕೋಲಾರ ಜಿಲ್ಲೆಗೆ ಪ್ರಕೃತಿ ವಿಕೋಪ ಪರಿಹಾರಕ್ಕಾಗಿ ರೂ.450.00 ಲಕ್ಷಗಳ ಅನುದಾನ ಬಿಡುಗಡ ಮಾಡಲಾಗಿದೆ.

ಮುಳಬಾಗಿಲು ತಾಲ್ಲೂಕಿನಲ್ಲಿ ಕುಡಿಯುವ ನೀರಿನ ಪೂರೈಕೆಗಾಗಿ ಗ್ರಾಮಾಂತರ ಪ್ರದೇಶಕ್ಕೆ ರೂ.31.00 ಲಕ್ಷ ಪಟ್ಟಣ ಪ್ರದೇಶಕ್ಕೆ ರೂ.4.00 ಲಕ್ಷ ಹಾಗೂ ಕುಡಿಯುವ ನೀರಿನ ಸಾಗಾಣಿಕೆಗಾಗಿ ರೂ.3.66 ಲಕ್ಷ, ಹೀಗೆ ಒಟ್ಟು ರೂ.38.66 ಲಕ್ಷ ಬಿಡುಗಡೆ ಮಾಡಲಾಗಿದೆ... ಮುಳಬಾಗಿಲು ತಾಲ್ಲೂಕಿನಲ್ಲಿ ಸರ್ಕಾರದ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ 62 ಕಾಮಗಾರಿಗಳನ್ನು ಕೈಗೊಂಡು, ರೂ.7.4 ಲಕ್ಷಗಳನ್ನು ವೆಚ್ಚ ಮಾಡಲಾಗಿದೆ ಹಾಗೂ 1029 ಕುಟುಂಬಗಳಿಗೆ ಉದ್ಯೋಗ ಒದಗಿಸಿ 9026 ಮಾನವ ದಿನಗಳನ್ನು ಸೃಜಿಸಲಾಗಿದೆ. ಪಟ್ಟಣ ಪ್ರದೇಶದಲ್ಲಿ ಸ್ಟೇಟ ಫೈನಾನ್ಸ ಕಮೀಶನ್ ಯೋಜನೆ ಅನುದಾನದಲ್ಲಿ ರೂ.2.06 ಕೋಟಿ ವೆಚ್ಚದ ಕಾಮಗಾರಿಗಳನ್ನು ಕೈಗೊಳ್ಳಲು ಕ್ರಿಯಾ ಯೋಜನೆ ಸಿದ್ಧಪಡಿಸಲಾಗಿದ್ದು, ಸದರೀ ಕಾಮಗಾರಿಗಳನ್ನು ಸಧ್ಯದಲ್ಲಿ ಅನುಷ್ಟಾನಗೊಳಿಸಲಾಗುವುದು.

ಶ್ರೀ ಅಮರೇಶ್ :- ಮಾನ್ಯ ಅಧ್ಯಕ್ಷರೇ, ಮಾನ್ಯ ಕಂದಾಯ ಸಚಿವರು ಈಗ ತಾನೇ ಹೇಳಿರುವಂತಹ ಉತ್ತರದಲ್ಲಿ ಬಿಡುಗಡೆ ಮಾಡಿರುವಂತಹ ಅನುದಾನದಲ್ಲಿ, ನಮ್ಮ ಮುಳಬಾಗಿಲಿಗೆ ಕುಡಿಯುವ ನೀರಿಗೋಸ್ಕರ 18 ಲಕ್ಷ ರೂಪಾಯಿ ಮಾತ್ರ

ಅನುದಾನ ಬಿಡುಗಡೆಯಾಗಿರುತ್ತದೆ. ಅದೇ ರೀತಿ ಕಾಮಗಾರಿಗಳ ಬಗ್ಗೆ ಮತ್ತೊಂದು ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿದ್ದು, ಇದುವರೆವಿಗೂ ಕೂಡ ಯಾವುದೇ ಕಾಮಗಾರಿಗಳನ್ನು ಕೈಗೊಂಡಿಲ್ಲ. ಮಾನ್ಯ ಸಚಿವರು 7.4 ಲಕ್ಷ ರೂಪಾಯಿಗಳನ್ನು ವೆಚ್ಚ ಮಾಡಲಾಗಿದೆ ಎಂದು ಹೇಳಿದ್ದಾರೆ. ಜಿಲ್ಲಾಧಿಕಾರಿಗಳು ತಪ್ಪು ಮಾಹಿತಿಯನ್ನು ನೀಡಿರುತ್ತಾರೆ. ಅಲ್ಲಿ ಇಲ್ಲಿಯವರೆವಿಗೂ ಯಾವುದೇ ಕಾಮಗಾರಿಗಳನ್ನು ಕೈಗೊಂಡಿಲ್ಲ.

ಶ್ರೀ ಜಿ. ಕರುಣಾಕರರೆಡ್ಡಿ :- ಮಾನ್ಯ ಅಧ್ಯಕ್ಷರೇ, ಜಿಲ್ಲಾಧಿಕಾರಿಗಳು ತಪ್ಪು ಮಾಹಿತಿಯನ್ನು ನೀಡಿದ್ದು, ಅಲ್ಲಿ ಯಾವುದೇ ಕಾಮಗಾರಿಗಳನ್ನು ಕೈಗೊಂಡಿಲ್ಲವೆಂದು ಮಾನ್ಯ ಸದಸ್ಯರು ಏನು ಪ್ರಸ್ತಾಪ ಮಾಡಿದ್ದಾರೆ, ಅದಕ್ಕೆ ತಕ್ಷಣವೇ ಸೂಚನೆಯನ್ನು ಕೊಡುತ್ತೇನೆ. ಆ ತಾಲ್ಲೂಕಿನಲ್ಲಿ ಏನು ಕಾಮಗಾರಿಗಳನ್ನು ಕೈಗೊಳ್ಳಬೇಕೆಂದು ಪ್ರಸ್ತಾಪಿಸಲಾಗಿದೆ, ಅದನ್ನು ತಕ್ಷಣ ಕೈಗೊಳ್ಳಬೇಕೆಂದು ಸೂಚಿಸುತ್ತೇನೆ.

ಆ) ವಿಷಯ :- 2006-07, 2007-08 ಮತ್ತು 2008-09ನೇ ಸಾಲಿನ ಆಯವ್ಯಯದಲ್ಲಿ ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪಯೋಜನೆಗಳಲ್ಲಿ ಸರ್ಕಾರ ವಿವಿಧ ಇಲಾಖೆಗಳಿಗೆ ಮಂಜೂರು ಮಾಡಿರುವ ಹಣ, ಬಿಡುಗಡೆ ಮಾಡಿರುವ ಹಣ, ಖರ್ಚಾಗಿರುವ ಮತ್ತು ಉಳಿತಾಯವಾಗಿರುವ ಹಣದ ಬಗ್ಗೆ.

ಶ್ರೀ ಆರ್. ಧ್ರುವನಾರಾಯಣ್ (ಕೊಳ್ಳೇಗಾಲ) :- ಮಾನ್ಯ ಅಧ್ಯಕ್ಷರೇ, 2006-07, 2007-08 ಮತ್ತು 2008-09ನೇ ಸಾಲಿನ ಆಯವ್ಯಯದಲ್ಲಿ ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪ ಯೋಜನೆಗಳಲ್ಲಿ ಸರ್ಕಾರ ವಿವಿಧ ಇಲಾಖೆಗಳಿಗೆ ಮಂಜೂರು ಮಾಡಿರುವ ಹಣ, ಬಿಡುಗಡೆ ಮಾಡಿರುವ ಹಣ, ಖರ್ಚಾಗಿರುವ ಮತ್ತು ಉಳಿತಾಯವಾಗಿರುವ ಹಣದ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನವನ್ನು ಸೆಳೆಯುತ್ತೇನೆ.

ಡಾ॥ ಬಿ.ಎಸ್. ಯಡಿಯೂರಪ್ಪ (ಸಮಾಜ ಕಲ್ಯಾಣ ಸಚಿವರ ಪರವಾಗಿ) :- ಮಾನ್ಯ ಅಧ್ಯಕ್ಷರೇ, ತಮ್ಮ ಅನುಮತಿಯನ್ನು ಪಡೆದು ಈ ಉತ್ತರವನ್ನು ನೀಡಬಯಸುತ್ತೇನೆ.

ರಾಜ್ಯದಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳ ಸಾಮಾಜಿಕ ಮತ್ತು ಆರ್ಥಿಕ ಅಭಿವೃದ್ಧಿಗಾಗಿ ಪರಿಶಿಷ್ಟ ಜಾತಿ ಉಪಯೋಜನೆ ಮತ್ತು ಗಿರಿಜನ ಉಪಯೋಜನೆ ಅಡಿ ವಿವಿಧ ಅಭಿವೃದ್ಧಿ ಇಲಾಖೆಗಳ ಮೂಲಕ ಕಾರ್ಯಕ್ರಮಗಳನ್ನು ರೂಪಿಸಿಕೊಂಡು ಅನುಷ್ಠಾನ ಮಾಡಲಾಗುತ್ತಿದೆ. 2006-07, 2007-08 ಮತ್ತು